ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ನಾಗಮಂಗಲ ಮುಖ್ಯ ರಸ್ತೆಯ ಕಳಪೆ ಕಾಮಗಾರಿಯ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

262 (493) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ನಾಗಮಂಗಲದಿಂದ ಶ್ರವಣಬೆಳಗೊಳ ಮುಖ್ಯ ರಸ್ತೆಯ ಕಾಮಗಾರಿ ಪ್ರಾರಂಭವಾಗಿ 1 ವರ್ಷ ಕಳೆದರೂ ಕಾಮಗಾರಿಯು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) 2017-2018 ರಿಂದ 2019-2020ನೇ ಸಾಲಿನವರೆಗೆ ನಾಗಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾಗಿರುವ ಕಾಮಗಾರಿಗಳು ಯಾವುವು ; (ಅಂದಾಜು ಪಟ್ಟಿ ಸಹಿತ ವಿವರ ನೀಡುವುದು)

(ಇ) ಇದರ ಸಂಬಂಧ ಸಾರ್ವಜನಿಕರು ಸಹಾಯಕ ಕಾರ್ಯಪಾಲಕ ಅಭಿಯಂತರರು, ನಾಗಮಂಗಲ ಉಪವಿಭಾಗ, ನಾಗಮಂಗಲ ಇವರಿಗೆ ಮನವಿ ಸಲ್ಲಿಸಿದರೂ ಈವರೆಗೂ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಸಂಬಂಧ ಗುತ್ತಿಗೆದಾರರ ಮತ್ತು ಎ.ಇ.ಇ. ರವರು ಕಳಪೆ ಕಾಮಗಾರಿ ಜೊತೆಗೆ ಕಾಮಗಾರಿ ವಿಳಂಬ ಮಾಡಿರುವುದಕ್ಕೆ ಕಾರಣರಾಗಿದ್ದು, ಸರ್ಕಾರ ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)